ಓ ಎಸ ನಂ. 79/2018
ಪಿಡಬ್ಲೂ-1 ( ಈಶ್ವರಮ್ಮ )

ಇಂದು ದಿನಾಂಕಃ 14-07-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.
ಪಾಟೀ ಸವಾಲುಃ ಶ್ರೀ ವಿ.ಜೆ.ಎಮ್ ವಕೀಲರಿಂದ (1 ರಿಂದ 4 ನೇ ಪ್ರತಿವಾದಿಗಳ ಪರ)

ನನ್ನ ತಂದೆಯವರು ಅನಾರೋಗ್ಯದಿಂದ ಹಾಸಿಗೆ ಹಿಡಿದಿದ್ದರು ಎಂದರೆ ಸರಿಯಲ್ಲ. ನನ್ನ ತಂದೆಯವರು ತಮ್ಮ ಪಿಂಚಣಿಯನ್ನು ತೆಗೆದುಕೊಳ್ಳಲು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಸೇಡಂಗೆ ಬರುತ್ತಿದ್ದರು ಎಂದರೆ ನಮ್ಮ ಅಣ್ಣನವರು ಸಹಿ ಮಾಡಿಕೊಂಡು ಬಂದು ತೆಗೆದುಕೊಳ್ಳುತ್ತಿದ್ದರು ಎಂದು ನುಡಿದಿರುತ್ತಾರೆ. ಅದಕ್ಕೆ ಸಂಬಂಧಪಟ್ಟಂತೆ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ತಂದೆಯವರು ಬ್ಯಾಂಕಿನಿಂದ ಚೆಕ್ ಪುಸ್ತಕವನ್ನು ತೆಗೆದುಕೊಂಡಿರುವುದಕ್ಕೆ ಸಂಬಂಧಪಟ್ಟಂತೆ ನ್ಯಾಯಾಲಯಕ್ಕೆ ಯಾವುದೇ ದಾಖಲೆಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನನ್ನ ತಂದೆಯವರಿಗೆ ವರ್ಷಕ್ಕೆ ಒಂದು ಬಾರಿ ಕಾರಿನಲ್ಲಿ ಕರೆದುಕೊಂಡು ಬಂದು ಹೋಗುತ್ತಿದ್ದರು. ನನ್ನ ತಂದೆಯವರು ಖುದ್ದಾಗಿ ಬಂದು ಬ್ಯಾಂಕಿಗೆ ಸರ್ವೈವಲ್ ಸರ್ಟಿಫಿಕೆಟನ್ನು ನೀಡುತ್ತಿದ್ದರು ಎಂದರೆ ಸರಿಯಲ್ಲ. ನನ್ನ ತಂದೆಯವರು ಮರಣ ಹೊಂದುವುದಕ್ಕಿಂತ ಮುಂಚೆ ನನ್ನ ತಂದೆಯವರಿಗೆ ಬಿಪಿ, ಮಧುಮೇಹ, ಕಣ್ಣಿನ ದೃಷ್ಟಿ ಕ್ಷೀಣಿಸಿದ್ದು, ಅವರು ಬಿದ್ದುರುವುದರಿಂದ ಕಾಲಿನಲ್ಲಿ ಊತವಾಗಿರುತ್ತದೆ. ಅದಕ್ಕೆ ಸಂಬಂಧಪಟ್ಟಂತೆ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ನನ್ನ ತಂದೆಯವರ ಸೇವೆ ಮಾಡಿದ್ದೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ನನ್ನ ತಂದೆಯವರಿಗೆ ಆಸ್ಪತ್ರೆಗೆ ತೋರಿಸಿವುದಕ್ಕೆ ಸಂಬಂಧಪಟ್ಟಂತೆ ಯಾವುದೇ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ ಮತ್ತು ಅಂತಹ ಸಂದರ್ಭ ಬಂದಿರುವುದಿಲ್ಲ. ನನ್ನ ತಂದೆಯವರು ಮರಣ ಹೊಂದುವುದಕ್ಕಿಂತ ಮುಂಚೆ ಆರೋಗ್ಯವಾಗಿದ್ದರು ಎಂದರೆ ಸರಿಯಲ್ಲ. ನನ್ನ ತಂದೆಯವರು ತನ್ನ ಸ್ವ-ಇಚ್ಚೆಯಿಂದ ಮೊಮ್ಮಗನಿಗೆ ವಿಲ್ ಬರೆದಿದ್ದಾರೆ ಎಂದರೆ ಸರಿಯಲ್ಲ.

(1 ರಿಂದ 4 ನೇ ಪ್ರತಿವಾದಿಗಳ ಪರ ವಕೀಲರ ವಿನಂತಿ ಮೇರೆಗೆ ಮುಂದುವರಿದ ಪಾಟೀ ಸವಾಲಿಗೆ ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ.ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಮ್.ಎಫ್.ಸಿ, ಸೇಡಂ.